ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	**692**
ಮಾನ್ಯ ಸದಸ್ಯರ ಹೆಸರು	ಶ್ರೀ ಕೆ.ಪಿ.ನಂಜುಂಡಿ ವಿಶ್ವಕರ್ಮ(ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	17.12.2021
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ವಿಶ್ವಕರ್ಮ ಸಮುದಾಯದ ಪಂಚ ಕಸುಬುಗಾರಿಕೆಗೆ ಸರ್ಕಾರ ನೀಡಿರುವ ಸವಲತ್ತುಗಳೇನು;	ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ವತಿಯಿಂದ ಪಂಚವೃತ್ತಿ ಅಭಿವೃದ್ಧಿಗಾಗಿ ಆರ್ಥಿಕ ನೆರವು ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ವಿಶ್ವಕರ್ಮ ಸಮುದಾಯದ ಸಾಂಪ್ರದಾಯಿಕ ವೃತ್ತಿಗಳಾದ ಕಮ್ಮಾರಿಕೆ ಅಕ್ಕಸಾಲಿ ಹಾಗೂ ಬಡಗಿ ವೃತ್ತಿಗಳಲ್ಲಿ ತೊಡಗಿರುವ ಕುಶಲಕರ್ಮಿಗಳಿಗೆ ರೂ.1,50,000/-ಗಳಂತೆ ಘಟಕ ವೆಚ್ಚ ಸಾಲ ಮಂಜೂರು ಮಾಡಲಾಗುವುದು. ಇದರಲ್ಲಿ ಶೇಕಡ 20ರಷ್ಟು ಗರಿಷ್ಠ ರೂ.25,000/-ಗಳ ಸಹಾಯಧನ ಮಂಜೂರು ಮಾಡಲಾಗುವುದು. ಶೇಕಡ 80ರಷ್ಟು ಸಾಲದ ಮೊತ್ತಕ್ಕೆ ಶೇಕಡ 4 ಬಡ್ಡಿದರ ವಿಧಿಸಲಾಗುವುದು ಹಾಗೂ ಭದ್ರತೆಗಾಗಿ ಆಸ್ತಿಯನ್ನು ಅಡಮಾನ ಮಾಡಿಸಿಕೊಂಡು ರೂ.1,50,000/-ಗಳನ್ನು ಮಂಜೂರು ಮಾಡಲಾಗುವುದು.
ಆ)	ಚಿನ್ನದ ಕೆಲಸ, ಬೆಳ್ಳಿಯ ಕೆಲಸ, ಶಿಲ್ಪದ ಕೆಲಸ, ಮರದ ಕೆಲಸ, ಕಟ್ಟಡದ ಕೆಲಸ ಮಾಡುವ ಬಡವರಿಗೆ ವಿಶೇಷ ಸೌಲಭ್ಯ ಒದಗಿಸುವುದರ ಬಗ್ಗೆ ಸರ್ಕಾರದ ನಿಲುವೇನು;	ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಲ್ಲಿ ಈ ಕೆಳಕಂಡ ಯೋಜನೆಗಳಡಿ ನೆರವು ನೀಡಲಾಗುತ್ತಿದೆ. 1. **ಪಂಚವೃತ್ತಿ ಅಭಿವೃದ್ಧಿಗಾಗಿ ಆರ್ಥಿಕ ನೆರವು ಯೋಜನೆ**: ಸದರಿ ಯೋಜನೆಯಡಿ ವಿಶ್ವಕರ್ಮ ಸಮುದಾಯದ ಜನರು ಕೈಗೊಳ್ಳುವ ಸಾಂಪ್ರದಾಯಿಕ ವೃತ್ತಿಗಳಾದ ಚಿನ್ನ-ಬೆಳ್ಳಿ ಕೆಲಸ, ಶಿಲ್ಪಕಲೆ, ಮರಗೆಲಸ, ಲೋಹ, ಎರಕದ ಕೆಲಸ ನಿರ್ವಹಿಸುವವರಿಗೆ ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಗರಿಷ್ಠ ರೂ.80,000/-ಗಳ ವರೆಗೆ ಸಾಲ ಹಾಗೂ ಗರಿಷ್ಠ ರೂ.20,000/-ಗಳ ಸಹಾಯಧನ ಮಂಜೂರು ಮಾಡಲಾಗುವುದು. 2. **ಸ್ವಯಂ ಉದ್ಯೋಗ ನೇರ ಸಾಲ ಯೋಜನೆ**: ಈ ಯೋಜನೆಯಡಿ ವಿಶ್ವಕರ್ಮ ಮತ್ತು ಅದರ ಉಪಜಾತಿಗಳಿಗೆ ಸೇರಿದ ಜನರು ಸ್ವಯಂ ಉದ್ಯೋಗ ಕೈಗೊಳ್ಳಲು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ರೂ.40,000/-ಗಳ ಸಾಲ ಮತ್ತು ಶೇ.30ರಷ್ಟು ಅಥವಾ ಗರಿಷ್ಠ ರೂ.10,000/-ಗಳ ಸಹಾಯಧನ ನೀಡಲಾಗುವುದು.

ಇ)	2020-21ನೇ ಕೋವಿಡ್ ಸಾಂಕ್ರಾಮಿಕ ದಿನಗಳಲ್ಲಿ ಸಂಕಷ್ಟ ವಿಶ್ವಕರ್ಮ ಸಮುದಾಯದ ಜನರಿಗೆ ಯಾವ ಪರಿಹಾರವನ್ನು ಒದಗಿಸಲಾಗಿದೆ? (ಸಂಪೂರ್ಣ ವಿವರ ನೀಡುವುದು)	2020-21 ನೇ ಸಾಲಿನ ಕೋವಿಡ್-19 ಸಂತ್ರಸ್ಥರಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿಶ್ವಕರ್ಮ ಸಮುದಾಯದ ಜನರಿಗೆ ಯಾವುದೇ ಪ್ರತ್ಯೇಕ ಪ್ಯಾಕೇಜ್ ನ್ನು ಘೋಷಣೆ ಮಾಡಿರುವುದಿಲ್ಲ.

ಸಂಖ್ಯೆ: ಹಿಂವಕ 748 ಬಿಎಂಎಸ್ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು